ಉ) ಕೇವಲ ಸಹಕಾರಿ ಸಂಸ್ಥೆಗಳಲ್ಲದೇ, ರಾಷ್ಟ್ರೀಕೃತ ಬ್ಯಾಂಕುಗಳ ಮೂಲಕವೂ ರೈತರಿಗೆ ಶೇಕಡ 3 ರ ಬಡ್ಡಿ ದರದಲ್ಲಿ ಸಾಲ ದೊರಕಿಸಿ ಕೊಡಲು ಸರ್ಕಾರದ ಮುಂದಿರುವ ಕ್ರಮಗಳೇನು?

ಶ್ರೀ ಲಕ್ಷ್ಮಣ ಸವದಿ (ಸಹಕಾರ ಸಚಿವರು) :

ಅ) 2009–10ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಬೀದರ್ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ವತಿಯಿಂದ ಶೇಕಡಾ 3ರ ಬಡ್ಡಿ ದರದಲ್ಲಿ 121162 ಸಣ್ಣ ಮತ್ತು ಅತಿ ಸಣ್ಣ ರೈತರು ರೂ.140.89 ಕೋಟಿ ಸಾಲವನ್ನು ಹಾಗೂ ಜಿಲ್ಲಾ ಕಸ್ಕಾರ್ಡ್ ಬ್ಯಾಂಕ್ ವತಿಯಿಂದ ದೀರ್ಘಾವಧಿ ಕೃಷಿ ಸಾಲವನ್ನು 64 ಜನ ಸಣ್ಣ ಮತ್ತು ಅತಿ ಸಣ್ಣ ರೈತರು ಪಡೆದುಕೊಂಡಿದ್ದಾರೆ.

ಆ) ಈ ಸಾಲಿನಲ್ಲಿ ವಿತರಿಸುವ ಸಾಲದ ಗುರಿ ಹಾಗೂ ಸಾಧನೆ ಈ ಕೆಳಕಂಡಂತಿದೆ.

(ರೂ.ಕೋಟಿಗಳಲ್ಲಿ)

ಬ್ಯಾಂಕಿನ ಹೆಸರು	ಗುರಿ		ಸಾಧನೆ	
ಬೀದರ್ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್	115000	230.00	105350	215.00
ಜಿಲ್ಲೆಯಲ್ಲಿನ ಪಿಕಾರ್ಡ್ ಬ್ಯಾಂಕುಗಳಿಂದ	661	–	102	–

ಇ) ಸಾಲಕ್ಕಾಗಿ ಕೋರಿರುವ ಪೈಕಿ ಅರ್ಹರಿರುವ ಎಲ್ಲಾ ರೈತರಿಗೆ ಸಾಲ ನೀಡಲಾಗಿದೆ.

ಈ) ಅನ್ವಯಿಸುವುದಿಲ್ಲ.

ಉ) ಸಹಕಾರಿ ಸಂಸ್ಥೆಗಳಿಗೆ ಸಮಾನವಾಗಿ ರಾಷ್ಟ್ರೀಕೃತ ಬ್ಯಾಂಕುಗಳ ಮೂಲಕ ಶೇಕಡಾ 3 ರ ಬಡ್ಡಿ ದರದಲ್ಲಿ ಸಾಲ ದೊರಕಿಸಿಕೊಡುವ ಪ್ರಸ್ತಾವವು ಸರ್ಕಾರದ ಮುಂದೆ ಇರುವುದಿಲ್ಲ.

ಕೋಲಾರ ಸಹಕಾರಿ ಬ್ಯಾಂಕ್ ದಿವಾಳಿ

1046 (981) ಶ್ರೀ ಎನ್.ಎಚ್. ಶಿವಶಂಕರರೆಡ್ಡಿ (ಗೌರಿ ಬಿದನೂರು) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲಾ ಸಹಕಾರ ಬ್ಯಾಂಕ್ ದಿವಾಳಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ವೈದ್ಯನಾಥನ್ ಸಮಿತಿ

ಶಿಫಾರಸ್ಸು ಮೇರೆಗೆ ಈ ಬ್ಯಾಂಕನ್ನು ಪುನಶ್ಚೇತನ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಕೋಲಾರ ಜಿಲ್ಲಾ ಸಹಕಾರ ಬ್ಯಾಂಕ್ ಪುನಶ್ಚೇತನಗೊಳಿಸಲು ಎಷ್ಟು ಹಣ ನೀಡಬೇಕಾಗಿದೆ? ಸಾಲವನ್ನು ಜಿಲ್ಲೆಯ ರೈತರಿಗೆ ನೀಡಲು ಸರ್ಕಾರ ಏನು ಯೋಜನೆ ರೂಪಿಸಿದೆ?

ಇ) ಚಿಕ್ಕಬಳ್ಳಾಪುರ ಜಿಲ್ಲೆ ಹೊಸದಾಗಿ ರಚನೆಯಾಗಿದ್ದು, ಡಿ.ಸಿ.ಸಿ. ಬ್ಯಾಂಕ್ ಸ್ಥಾಪನೆಯಾಗಿಲ್ಲವೇ? ಹಾಗಿಲ್ಲದಿದ್ದಲ್ಲಿ ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಲಕ್ಷ್ಮಣ ಸ. ಸವದಿ (ಸಹಕಾರ ಸಚಿವರು) :

ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ., ಕೋಲಾರ ಇದರ ಆರ್ಥಿಕ ಪರಿಸ್ಥಿತಿ ದುರ್ಬಲವಾಗಿದ್ದು, ಹಣಕಾಸಿನ ಮುಗ್ಗಟ್ಟನ್ನು ಎದುರಿಸುತ್ತಿದ್ದು, ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949ರ ಪ್ರಕರಣ 11(1) ಅನ್ನು ಪಾಲನೆ ಮಾಡಲು ವಿಫಲವಾಗಿರುತ್ತದೆ. ಪ್ರೊ॥ ಎ. ವೈದ್ಯನಾಥನ್ ಕಾರ್ಯಪಡೆಯ ಶಿಫಾರಸ್ಸುಗಳ ಆಧಾರದ ಮೇಲೆ ಭಾರತ ಸರ್ಕಾರವು ಕೃಷಿ ಪತ್ತಿನ ಸಹಕಾರಿ ಸಂಸ್ಥೆಗಳ ಪುನರುಸ್ಥಾನಕ್ಕಾಗಿ ರೂಪಿಸಿರುವ ಪುನಶ್ಚೇತನ ಪ್ಯಾಕೇಜಿನಡಿ ಈ ಬ್ಯಾಂಕನ್ನು ಪುನಶ್ಚೇತನಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ.

ಆ) ಕೋಲಾರ ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಮತ್ತು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿಗೆ ವೈದ್ಯನಾಥನ್ ಪ್ಯಾಕೇಜಿನಡಿ ಕೇಂದ್ರ ಸರ್ಕಾರದ ಪಾಲು ರೂ.5688.00 ಲಕ್ಷಗಳು ಮತ್ತು ರಾಜ್ಯ ಸರ್ಕಾರದ ಪಾಲು ರೂ.519.00 ಲಕ್ಷಗಳು ದೊರೆಯಲಿದೆ.

2009–10ನೇ ಸಾಲಿನಲ್ಲಿ ರೂ.650.00 ಲಕ್ಷಗಳ ಬೆಳೆ ಸಾಲವನ್ನು ಶೇಕಡ 3ರ ಬಡ್ಡಿ ದರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಕೃಷಿ ಪತ್ತಿನ ಸೇವಾ ಸಹಕಾರ ಸಂಘಗಳ ಮೂಲಕ ರೈತರಿಗೆ ವಿತರಿಸಲು ಯೋಜನೆ ಹಮ್ಮಿಕೊಳ್ಳಲಾಗಿದ್ದು, 2009–10ನೇ ಸಾಲಿನಲ್ಲಿ ದಿನಾಂಕ: 12–03–2010 ರವರೆಗೆ 1,172 ರೈತ ಸದಸ್ಯರಿಗೆ ರೂ.361.10 ಲಕ್ಷ ಅಲ್ಪಾವಧಿ ಬೆಳೆ ಸಾಲವನ್ನು ವಿತರಿಸಲಾಗಿದೆ.

ಇ) ಚಿಕ್ಕಬಳ್ಳಾಪುರ ಜಿಲ್ಲೆಗೆ ಪತ್ಯೇಕವಾಗಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕು ಸ್ಥಾಪನೆಯಾಗಿರುವುದಿಲ್ಲ ಸಧ್ಯದ ಪರಿಸ್ಥಿತಿಯಲ್ಲಿ ಚಿಕ್ಕಬಳ್ಳಾಪುರ

ಜಿಲ್ಲೆಗೆ ಪ್ರತ್ಯೇಕ ಡಿ.ಸಿ.ಸಿ. ಬ್ಯಾಂಕನ್ನು ಸ್ಥಾಪಿಸುವ ಆರ್ಥಿಕ ಸಾಧ್ಯತೆ (Viability) ಇರುವುದಿಲ್ಲ.

ಹೊಸ ನ್ಯಾಯ ಬೆಲೆ ಅಂಗಡಿ

978 (1438) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ನ್ಯಾಯಬೆಲೆ ಅಂಗಡಿಗಳಿವೆ (ಗ್ರಾಮವಾರು ವಿವರ ನೀಡುವುದು);

ಆ) ಇಲ್ಲಿನ ಜನಸಂಖ್ಯೆಗೆ ಅನುಗುಣವಾಗಿ ಇನ್ನೂ ಎಷ್ಟು ನ್ಯಾಯಬೆಲೆ ಅಂಗಡಿಗಳ ಅವಶ್ಯಕತೆ ಇದೆ;

ಇ) ಪ್ರಸಕ್ತ ಸಾಲಿನಲ್ಲಿ, ಈ ಕ್ಷೇತ್ರದಲ್ಲಿ ಹೊಸದಾಗಿ ಎಷ್ಟು ನ್ಯಾಯಬೆಲೆ ಅಂಗಡಿಗಳನ್ನು ತೆರೆಯುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದೆ ಇದೆ;

ಈ) ಈ ಪೈಕಿ ಎಷ್ಟು ಅಂಗಡಿಗಳಿಗೆ ಮಂಜೂರಾತಿ ನೀಡಲಾಗುವುದು?

ಶ್ರೀ ಹೆಚ್. ಹಾಲಪ್ಪ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ಭಾಲ್ಕಿ ವಿಧಾನ ಸಭಾ ಕ್ಷೇತ್ರದಲ್ಲಿ ಒಟ್ಟು 135 ನ್ಯಾಯಬೆಲೆ ಅಂಗಡಿಗಳು ಇರುತ್ತವೆ.

(ಗ್ರಾಮವಾರು ವಿವರ ಅನುಬಂಧದಲ್ಲಿ ಲಗತ್ತಿಸಿದೆ)

ಆ) ರಾಜ್ಯದಲ್ಲಿ ಜನಸಂಖ್ಯೆಗೆ ಅನುಗುಣವಾಗಿ ನ್ಯಾಯಬೆಲೆ ಅಂಗಡಿಗಳನ್ನು ಪ್ರಾರಂಭಿಸುವ ಪದ್ಧತಿ ಜಾರಿಯಲ್ಲಿರುವುದಿಲ್ಲ.

ಆದರೆ, 1992ರ ಅವಶ್ಯಕ ವಸ್ತುಗಳ (ಸಾ.ವಿ.ಪ) ನಿಯಂತ್ರಣ ಆದೇಶದನ್ವಯ ಗ್ರಾಮಾಂತರ ಪ್ರದೇಶದಲ್ಲಿ ಕನಿಷ್ಟ 300 ಪಡಿತರ ಚೀಟಿಗಳು ಹಾಗೂ ಪಟ್ಟಣ ಪ್ರದೇಶಗಳಲ್ಲಿ 500 ಪಡಿತರ ಚೀಟಿಗಳು ಲಭ್ಯವಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಬೆಂಗಳೂರು ಅನೌಪಚಾರಿಕ ಪಡಿತರ ಪ್ರದೇಶದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಅಪರ ನಿರ್ದೇಶಕರು ನ್ಯಾಯಬೆಲೆ ಅಂಗಡಿಗಳಿಗೆ ನಿಯಮಾ